ಚಿನ್ನದ ಸಾಲ ನೀಡುವ ಕಂಪೆನಿಗಳು ಕದ್ದ ಚಿನ್ನವನ್ನು ಅಡಮಾನವಿರಿಸಿಕೊಳ್ಳಲಾಗದು: ಹೈಕೋರ್ಟ್ ಆದೇಶ

ಬೆಂಗಳೂರು, ಫೆ.13: ಕದ್ದ ಆಸ್ತಿ ಹೊಂದಿರುವ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳು ಪೊಲೀಸರು ಕೇಳಿದಾಗ ಅದನ್ನು ಹಸ್ತಾಂತರ ಮಾಡಲು ವಿಳಂಬಿಸುವ ಅಥವಾ ನಿರಾಕರಿಸುವ ಯಾವುದೇ ಕಾನೂನುಬದ್ಧ ಹಕ್ಕು ಹೊಂದಿರುವುದಿಲ್ಲ, ಚಿನ್ನದ ಸಾಲ ನೀಡುವ ಕಂಪೆನಿಯಾಗಿದ್ದರೂ ಸಹ ಬಡ್ಡಿ ಮತ್ತು ಭದ್ರತೆಯ ಕಾರಣ ನೀಡಿ ಕದ್ದ ವಸ್ತುಗಳನ್ನು ತನ್ನ ಬಳಿಯೇ ಇಟ್ಟುಕೊಳ್ಳುವುದಕ್ಕೆ ಅವಕಾಶವಿಲ್ಲ ಎಂದು ಹೈಕೋರ್ಟ್ ಆದೇಶಿಸಿದೆ.

ಕೆಂಗೇರಿಯ ಕರೂರು ವೈಶ್ಯ ಬ್ಯಾಂಕ್ ಶಾಖೆಯಿಂದ ಕದ್ದ ಒಡವೆಗಳನ್ನು ಅಡವಿಟ್ಟುಕೊಂಡು ಸಾಲ ಮಂಜೂರು ಮಾಡಿದ್ದ ಆರೋಪದಲ್ಲಿ ಕದ್ದ ಒಡವೆಗಳನ್ನು ಒಪ್ಪಿಸುವಂತೆ ಕೆಂಗೇರಿ ಪೊಲೀಸರು ನೀಡಿದ್ದ ನೋಟಿಸ್ ಪ್ರಶ್ನಿಸಿ ಐಐಎಫ್ ಎಲ್ ಫೈನಾನ್ಸ್ ಕಂಪೆನಿ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿರುವ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಆದೇಶ ಮಾಡಿದೆ.

ಪ್ರಕರಣವೇನು?: ಕರೂರು ವೈಶ್ಯ ಬ್ಯಾಂಕ್‌ನ ಕೆಂಗೇರಿ ಶಾಖೆಯಲ್ಲಿ ಮಹಿಳಾ ಸಿಬ್ಬಂದಿಯೊಬ್ಬರು 2022ರಿಂದ ಸಹಾಯಕ ವ್ಯವಸ್ಥಾಪಕಿಯಾಗಿ ಸೇವೆ ಸಲ್ಲಿಸುತ್ತಿದ್ದರು. 2025ರ ಅಕ್ಟೋಬರ್ ತಿಂಗಳಲ್ಲಿ ನಡೆದ ಆನಿರೀಕ್ಷಿತ ಮರು ಮೌಲ್ಯಮಾಪನದ ಸಮಯದಲ್ಲಿ ಸಹಾಯಕ ವ್ಯವಸ್ಥಾಪಕಿ ನಿರ್ವಹಿಸುವ ಚಿನ್ನದ ಸಾಲ ಖಾತೆಗಳ ಸಂಬಂಧ ಗಂಭೀರ ಅಕ್ರಮಗಳು ಪತ್ತೆಯಾಗಿದ್ದವು.

ಈ ಕುರಿತು ಪರಿಶೀಲನೆ ನಡೆಸಿದಾಗ, ಗ್ರಾಹಕರು ಅಡವಿಟ್ಟಿದ್ದ ನಿಜವಾದ ಚಿನ್ನಾಭರಣಗಳನ್ನು ರಹಸ್ಯವಾಗಿ ತೆಗೆದು ನಕಲಿ ವಸ್ತುಗಳೊಂದಿಗೆ ಬದಲಾಯಿಸುವ ಮೂಲಕ ಕಳ್ಳತನ ಮತ್ತು ಕ್ರಿಮಿನಲ್ ನಂಬಿಕೆ ದ್ರೋಹಕ್ಕೆ ಸಮನಾದ ಕೃತ್ಯಗಳಲ್ಲಿ ಅವರು ಭಾಗಿಯಾಗಿರುವ ಅಂಶ ಬೆಳಕಿಗೆ ಬಂದಿತ್ತಲ್ಲದೆ, ಕದ್ದ ಒಡವೆಗಳನ್ನು ಐಐಎಫ್ ಎಲ್ ಫೈನಾನ್ಸ್ ಕಂಪೆನಿ ಸೇರಿ ವಿವಿಧೆಡೆಗಳಲ್ಲಿ ಅಡವಿಟ್ಟು ಸಾಲ ಪಡೆದುಕೊಂಡಿದ್ದ ಆರೋಪವಿತ್ತು.

ಈ ಸಂಬಂಧ ಕರೂರು ವೈಶ್ಯ ಬ್ಯಾಂಕ್ ದೂರು ನೀಡಿದ್ದ ಹಿನ್ನೆಲೆಯಲ್ಲಿ ಪೊಲೀಸರು ಫೈನಾನ್ಸ್ ಕಂಪೆನಿಗೆ ನೋಟಿಸ್ ಜಾರಿ ಮಾಡಿದ್ದರು. ಇದರಿಂದ, ನೋಟಿಸ್ ರದ್ದು ಕೋರಿ ಕಂಪೆನಿ ಹೈಕೋರ್ಟ್ ಮೆಟ್ಟಿಲೇರಿತ್ತು.

ಸಿ.ಕೆ.ರಾಮಮೂರ್ತಿ ಆಯ್ಕೆ ಅಸಿಂಧು ಕೋರಿದ ಅರ್ಜಿ
ಮಾರ್ಚ್ 2ರಿಂದ ಪ್ರತಿದಿನ ವಿಚಾರಣೆ ನಡೆಸಲಿರುವ ಹೈಕೋರ್ಟ್

ಬೆಂಗಳೂರು, ಫೆ.13: ಕಳೆದ ವಿಧಾನಸಭೆ ಚುನಾವಣೆಯಲ್ಲಿ (2023) ಬೆಂಗಳೂರಿನ ಜಯನಗರ ಕ್ಷೇತ್ರದಿಂದ ಬಿಜೆಪಿಯ ಸಿ.ಕೆ. ರಾಮಮೂರ್ತಿ ಅವರ ಆಯ್ಕೆ ಅಸಿಂಧುಗೊಳಿಸಲು ಕೋರಿ ಕಾಂಗ್ರೆಸ್‌ನ ಪರಾಜಿತ ಅಭ್ಯರ್ಥಿ ಸೌಮ್ಯಾ ರೆಡ್ಡಿ ಸಲ್ಲಿಸಿರುವ ಚುನಾವಣಾ ತಕರಾರು ಅರ್ಜಿಯನ್ನು ಮಾರ್ಚ್ 2ರಿಂದ ಪ್ರತಿದಿನ ವಿಚಾರಣೆ ನಡೆಸುವುದಾಗಿ ಹೈಕೋರ್ಟ್ ತಿಳಿಸಿದೆ.

ಸಿ.ಕೆ.ರಾಮಮೂರ್ತಿ ಅವರನ್ನು ವಿಜೇತ ಅಭ್ಯರ್ಥಿ ಎಂದು ಘೋಷಿಸಿ ಚುನಾವಣಾ ಆಯೋಗ ಪ್ರಕಟಿಸಿರುವ ಫಲಿತಾಂಶ ರದ್ದುಪಡಿಸುವಂತೆ ಹಾಗೂ 827 ಅಂಚೆ ಮತಗಳ ಮರು ಎಣಿಕೆ ಮಾಡಲು ಚುನಾವಣಾ ಆಯೋಗಕ್ಕೆ ನಿರ್ದೇಶಿಸುವಂತೆ ಕೋರಿ ಸೌಮ್ಯಾ ರೆಡ್ಡಿ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಎಸ್. ರಾಚಯ್ಯ ಅವರಿದ್ದ ಏಕಸದಸ್ಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಸಿ.ಕೆ.ರಾಮಮೂರ್ತಿ ಪರ ವಕೀಲರು, ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ನಿರ್ಧರಿಸಬೇಕಾಗಿರುವ ವಿಚಾರಗಳ (ವಿವಾದಾಂಶಗಳು) ಕರಡು ಪ್ರತಿಯನ್ನು ಸಲ್ಲಿಸಲು ತಮಗೆ ಕಾಲಾವಕಾಶ ನೀಡುವಂತೆ ಕೋರಿದರು. ಇದಕ್ಕೆ ಸೌಮ್ಯಾ ರೆಡ್ಡಿ ಪರ ವಕೀಲರು, ನ್ಯಾಯಾಲಯ ಹಲವು ಬಾರಿಗೆ ಕಾಲಾವಕಾಶ ನೀಡಿದ ಹೊರತಾಗಿಯೂ ಸಿ.ಕೆ.ರಾಮಮೂರ್ತಿ ಅವರು ಕರಡು ವಿವಾದಾಂಶಗಳ ಪ್ರತಿ ಸಲ್ಲಿಸದೇ ಕಾಲ ದೂಡುತ್ತಿದ್ದಾರೆ ಎಂದು ಆಕ್ಷೇಪಿಸಿದರು.

ವಾದ ಆಲಿಸಿದ ನ್ಯಾಯಪೀಠ, ಸಿ.ಕೆ. ರಾಮಮೂರ್ತಿ ಅವರು ಫೆ.18ರೊಳಗೆ ಕರಡು ವಿವಾದಾಂಶಗಳನ್ನು ಸಲ್ಲಿಸಬೇಕು. ಇದು ಅವರಿಗೆ ನೀಡಲಾಗುತ್ತಿರುವ ಕೊನೆಯ ಅವಕಾಶವಾಗಿದೆ. ಹೆಚ್ಚು ಸಮಯ ಅರ್ಜಿ ವಿಚಾರಣೆ ಬಾಕಿ ಉಳಿಸಿಕೊಳ್ಳಲು ಆಗುವುದಿಲ್ಲ. ತ್ವರಿತವಾಗಿ ಚುನಾವಣಾ ತಕರಾರು ಅರ್ಜಿಗಳನ್ನು ಇತ್ಯರ್ಥಪಡಿಸಲು ಸುಪ್ರೀಂಕೋರ್ಟ್ ಈಗಾಗಲೇ ನಿರ್ದೇಶನ ನೀಡಿದೆ. ಆದ್ದರಿಂದ, ಮಾರ್ಚ್ 2ರಿಂದ ಅರ್ಜಿಯನ್ನು ಪ್ರತಿದಿನ ವಿಚಾರಣೆ ನಡೆಸಿ, ಒಂದು ತಿಂಗಳಲ್ಲಿ ವಿಲೇವಾರಿ ಮಾಡಲಾಗುವುದು ಎಂದು ತಿಳಿಸಿ ವಿಚಾರಣೆ ಮುಂದೂಡಿತು.

ಪೋಷಕರಿಂದ ಅರ್ಜಿ ಆಹ್ವಾನ

ಬೆಂಗಳೂರು, ಫೆ.13: ಬಾಲನ್ಯಾಯ ಕಾಯ್ದೆ -2015 ಸೆಕ್ಷನ್-44ರಅನ್ವಯ ಮಕ್ಕಳನ್ನು ಪೋಷಕತ್ವ ಯೋಜನೆಯಡಿ ಪಾಲನೆ ಹಾಗೂ ಪೋಷಣೆಗಾಗಿ ಆಸಕ್ತಿ ಇರುವ ಪೋಷಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಮಗುವಿಗೆ ಸಂಬಂಧವಿಲ್ಲದ ಕುಟುಂಬಕ್ಕೆ ತಾತ್ಕಾಲಿಕವಾಗಿ ಅಥವಾ ವಿಸ್ತರಿಸಲ್ಪಟ್ಟ ವರ್ಷದ ಅವಧಿಗೆ ಮೀರದಂತೆ ಮಗುವನ್ನು ಪೋಷಕತ್ವ ಯೋಜನೆಯಡಿಯಲ್ಲಿ ನಿಯೋಜನೆ ಮಾಡಬಹುದಾಗಿದೆ. ಮಗು ಹಾಗೂ ಕುಟುಂಬದ ಹೊಂದಾಣಿಕೆಯ ಆಧಾರದ ಮೇರೆಗೆ ಮಕ್ಕಳ ಕಲ್ಯಾಣ ಸಮಿತಿಯು ಮಗುವನ್ನು 18ವರ್ಷದ ವಯಸ್ಸಿನವರೆಗೂ ಪೋಷಕತ್ವವನ್ನು ಮುಂದುವರಿಸಲು ಅವಕಾಶ ಕಲ್ಪಿಸುತ್ತದೆ.

ಬೆಂಗಳೂರು ನಗರ ದಕ್ಷಿಣ(ಕೆಂಗೇರಿ) ಜಿಲ್ಲೆಯ ಬಾಲನ್ಯಾಯ ಕಾಯ್ದೆಯಡಿ ನೋಂದಣಿಯಾಗಿರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ವಿವಿಧ ರೀತಿಯ ಸಂಕಷ್ಟಕ್ಕೆ ಒಳಗಾಗಿ ದಾಖಲಾಗಿರುವ 7 ರಿಂದ 18 ವರ್ಷದ ಒಳಗಿನ ಮಕ್ಕಳನ್ನು ಪೋಷಕತ್ವ ಯೋಜನೆಯಡಿಯಲ್ಲಿ ನೋಡಿಕೊಳ್ಳಲು ಆಸಕ್ತಿ ಇರುವ ಪೋಷಕರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ ದಕ್ಷಿಣ(ಕೆಂಗೇರಿ), ನಂ.27/17, 2ನೇ ಮಹಡಿ, ಅಕ್ಷಯ ಸ್ಕೇರ್, 80 ಅಡಿ ವರ್ತುಲ ರಸ್ತೆ, ಪಾಪರೆಡ್ಡಿಪಾಳ್ಯ, ನಾಗರಬಾವಿ-2ನೇ ಹಂತ, ಬೆಂಗಳೂರು-72 ಅಥವಾ ಇ-ಮೇಲ್ southdcpo@gamil.com ಅಥವಾ ದೂ.ಸಂಖ್ಯೆ: 080-2344 2233ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಅಕ್ರಮ ಗಣಿ ಗುತ್ತಿಗೆ ಪರವಾನಿಗೆ ಆರೋಪ
ಸಿಎಂ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿಗೆ ನಿರ್ದೇಶನ ಕೋರಿದ್ದ ಅರ್ಜಿ ಮುಂದೂಡಿಕೆ

ಬೆಂಗಳೂರು, ಫೆ.13: ಅಕ್ರಮವಾಗಿ ಗಣಿ ಗುತ್ತಿಗೆ ಪರವಾನಿಗೆಗಳನ್ನು ನೀಡಿದ ಹಾಗೂ ಕಾನೂನುಬಾಹಿರವಾಗಿ ಗಣಿ ಗುತ್ತಿಗೆ ನವೀಕರಣ ಮಾಡಿದ ಆರೋಪದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಭ್ರಷ್ಟಾಚಾರ ತಡೆ (ಪಿಸಿ) ಕಾಯ್ದೆಯಡಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲು ರಾಜ್ಯಪಾಲರಿಗೆ ಆದೇಶಿಸುವಂತೆ ಹಾಗೂ ಪ್ರಕರಣದ ತನಿಖೆ ನಡೆಸುವಂತೆ ಸಿಬಿಐಗೆ ನಿರ್ದೇಶಿಸುವಂತೆ ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಎ.17ಕ್ಕೆ ಮುಂದೂಡಿದೆ.

ಬೆಂಗಳೂರಿನ ಉದ್ಯಮಿ ಎಂ.ಪಿ.ವೇಣುಗೋಪಾಲ್ ಎಂಬವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಹಿರಿಯ ವಕೀಲ ಕೆ.ಶಶಿಕಿರಣ್ ಶೆಟ್ಟಿ ಹಾಜರಾಗಿ, ಅರ್ಜಿದಾರರ ಪರ ವಕೀಲರು ವಿಚಾರಣೆಗೆ ಸತತ ಗೈರಾದ ಹಿನ್ನೆಲೆಯಲ್ಲಿ ಈ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ನ್ಯಾಯಾಲಯ ಈ ಹಿಂದೆ ವಜಾಗೊಳಿಸಿತ್ತು. ಅರ್ಜಿದಾರರ ವಕೀಲರ ಮನವಿಯಂತೆ ಅರ್ಜಿಯನ್ನು ವಿಚಾರಣೆಗೆ ಮರು ಪರಿಗಣಿಸಲಾಗಿದೆ. ಆದರೆ, ಐದಾರು ಬಾರಿ ಕಾಲಾವಕಾಶ ಕೇಳಿದ್ದಾರೆ, ಈ ದಿನವೂ ಸಹ ಮತ್ತೆ ಕಾಲಾವಕಾಶ ಕೇಳುತ್ತಿದ್ದಾರೆ ಎಂದರು. ಮುಂದುವರಿದು, ಇದೇ ವಿಚಾರವಾಗಿ ಈ ಹಿಂದೆ ರಾಮಮೂರ್ತಿ ಗೌಡ ಎಂಬವರು ಖಾಸಗಿ ದೂರು (ಪಿಸಿಆರ್) ಸಲ್ಲಿಸಿದ್ದರು. ಆ ಖಾಸಗಿ ದೂರಿನಲ್ಲಿದ್ದ ವಿಷಯ ಮತ್ತು ಅಂಶಗಳನ್ನೇ ಪುಟ ಸಂಖ್ಯೆಗಳ ಸಮೇತ ಈ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ನಕಲು ಮಾಡಲಾಗಿದೆ. ಆ ಖಾಸಗಿ ದೂರಿನಲ್ಲೂ ಸಿದ್ದರಾಮಯ್ಯ ಸೇರಿ ಈಗಿನ ಪಿಐಎಲ್‌ನಲ್ಲಿರುವ ಎಲ್ಲರನ್ನೂ ಪ್ರತಿವಾದಿಗಳನ್ನಾಗಿ ಮಾಡಲಾಗಿತ್ತು ಎಂದು ನ್ಯಾಯಾಲಯದ ಗಮನಕ್ಕೆ ತಂದರು.

ಇದನ್ನು ಪರಿಗಣಿಸಿದ ನ್ಯಾಯಪೀಠ, ಖಾಸಗಿ ದೂರಿನ ಅಂಶಗಳನ್ನೇ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ನಕಲು ಮಾಡಲಾಗಿದೆ ಎಂದು ಸಿಎಂ ಪರ ವಕೀಲರು ಹೇಳುತ್ತಿದ್ದಾರೆ. ಆದ್ದರಿಂದ, ಖಾಸಗಿ ದೂರಿನ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಅರ್ಜಿದಾರರ ಪರ ವಕೀಲರಿಗೆ ನಿರ್ದೇಶಿಸಿ, ಅರ್ಜಿ ವಿಚಾರಣೆ ಮುಂದೂಡಿತು.

ವರ್ಗಾವಣೆ

ಬೆಂಗಳೂರು, ಫೆ.13: ಸ್ಮಾರ್ಟ್ ಆಡಳಿತ ಕೇಂದ್ರದ ಕಾರ್ಯನಿರ್ವಾಹಕ ನಿರ್ದೇಶಕ ರಾಹುಲ್ ರತ್ನಂ ಪಾಂಡೆ ಅವರನ್ನು ರಾಜ್ಯ ಔಷಧ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ತಕ್ಷಣದಿಂದಲೇ ಜಾರಿಗೆ ಬರುವಂತೆ ಶುಕ್ರವಾರ ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ಅಲ್ಲದೇ, ರಾಹುಲ್ ರತ್ನಂ ಪಾಂಡೆ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಆಡಳಿತ ವಿಭಾಗದ ನಿರ್ದೇಶಕ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆಯನ್ನು ವಹಿಸಲಾಗಿದೆ.

ಕಲಬುರಗಿ ವಿಭಾಗದ ಹಿರಿಯ ಸಹಾಯಕ ಆಯುಕ್ತರಾದ ಸಾಹಿತ್ಯ ಎಂ.ಆಲದಕಟ್ಟಿ ಅವರನ್ನು ಸ್ಮಾರ್ಟ್ ಆಡಳಿತ ಕೇಂದ್ರದ ಕಾರ್ಯನಿರ್ವಾಹಕ ನಿರ್ದೇಶಕರನ್ನಾಗಿ ವರ್ಗಾವಣೆ ಮಾಡಲಾಗಿದೆ.

ಶ್ರೀಗಂಧ ಮರಗಳಿಗೆ ವೈಜ್ಞಾನಿಕ ಬೆಲೆ ನಿಗದಿಗೆ ಆಗ್ರಹ

ಬೆಂಗಳೂರು, ಫೆ.13: ರಾಜ್ಯ ಸರಕಾರ ಶ್ರೀಗಂಧ ಮರಗಳ ಬೆಲೆಯನ್ನು ವೈಜ್ಞಾನಿಕವಾಗಿ ನಿಗದಿಪಡಿಸಬೇಕು ಎಂದು ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಗೌರವಾಧ್ಯಕ್ಷ ಕೆ.ಅಮರನಾರಾಯಣ ಆಗ್ರಹಿಸಿದ್ದಾರೆ.

ಶುಕ್ರವಾರ ನಗರದ ಪ್ರೆಸ್‌ಕ್ಲಬ್‌ನಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರಕಾರ 2013-14 ರಿಂದ ಸಿರಿಚಂದನವನ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಕೃಷಿ ಭೂಮಿಯಲ್ಲಿ ಬೆಳೆದ 'ನಿಮ್ಮ ಭೂಮಿಯ ಶ್ರೀಗಂಧದ ಮರ ನಿಮ್ಮದು' ಎಂದು ಘೋಷಿಸಿದೆ. ಕೇಂದ್ರ ಸರಕಾರ ಶ್ರೀಗಂಧವನ್ನು ಕೃಷಿ ಉತ್ಪನ್ನವೆಂದು ಘೋಷಿಸಿ ಅಧಿಕ ಮೌಲ್ಯದ ಕೃಷಿಯಾಗಿ ಅಭಿವೃದ್ಧಿಪಡಿಸಲಾಗುವುದೆಂದು ತಿಳಿಸಿದೆ ಎಂದರು.

ಶ್ರೀಗಂಧ ಅಭಿವೃದ್ಧಿ ಸಮಿತಿಯು ಈಗಿರುವ ಅನೇಕ ರೈತ ವಿರೋಧಿ ನಿರ್ಬಂಧಗಳನ್ನು ತೆಗೆದುಹಾಕಲು ನಿರ್ದೇಶನ ನೀಡಿದ್ದರು, ರಾಜ್ಯ ಸರಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಶ್ರೀಗಂಧ ಮರದ ಮೌಲ್ಯ ನಿರ್ಧರಿಸುವಲ್ಲಿ ಅರಣ್ಯ ಅಧಿಕಾರಿಗಳು ಮೌನ ವಹಿಸಿ ದ್ವಂದ್ವ ನೀತಿ ಅನುಸರಿಸುತ್ತಿದ್ದಾರೆ ಎಂದರು.

ರಾಜ್ಯ ಸರಕಾರ ಮಾ.31 ರೊಳಗಾಗಿ ನಮ್ಮ ಎಲ್ಲ ಬೇಡಿಕೆಗಳನ್ನು ಈಡೇರಿಸದಿದ್ದರೆ, ಎ.1ರ ನಂತರದಲ್ಲಿ ಸರಕಾರದ ಆದೇಶವನ್ನು ಉಲ್ಲಂಘಿಸಿ, ಕೃಷಿ ಉತ್ಪನ್ನಗಳ ರೀತಿಯಲ್ಲಿ ನಾವೇ ಶ್ರೀಗಂಧವನ್ನು ಸಂಸ್ಕರಿಸಿ ಮಾರಾಟ ಮಾಡುತ್ತೇವೆ ಎಂದು ಅವರು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಯು.ಶರಣಪ್ಪ, ಛಾಯಾ ಎ.ಎಂ, ಟಿ.ಎನ್. ವಿಶುಕುಮಾರ್, ಬಸವರಾಜಪ್ಪ ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಇಂಜಿನೀಯರರು, ಲೋಕೋಪಯೋಗಿ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ
ಸಂ.ಕಾನಿಅ/ಲೋಇ/ಕವಿ/ತಾಶಾ-1,4,5/.ಟೆಂಡರ್.ಅಧಿಸೂಚನೆ/2025-26/7604 ದಿನಾಂಕ:13.02.2026
ಅಲ್ಪಾವಧಿ ಟೆಂಡರ್ ಅಧಿಸೂಚನೆ
1) ಕಾಮಗಾರಿ ವಿವರ : ಕಾರ್ಯನಿರ್ವಾಹಕ ಇಂಜೀನಿಯರರು, ಲೋಕೋಪಯೋಗಿ , ಇಲಾಖೆ, ಕಲಬುರಗಿ ವಿಭಾಗ ಕಾರ್ಯಲಯದಿಂದ CMIDP & 8443, ಎಮ್.ಪಿ ಲ್ಯಾಡ್, ಕೆ.ಕೆ.ಆರ್.ಡಿ.ಬಿ. **ಯೋಜನೆಯಡಿಯಲ್ಲಿ ಮಂಜೂರಾದ (ಒಟ್ಟು 10)** ಕಾಮಗಾರಿಗಳಿಗೆ ಟೆಂಡರ ಕರೆಯಲಾಗಿದೆ. ಇಂಡೆಂಟ್ ಸಂಖ್ಯೆ: **ಸಾಮಾನ್ಯ (8)** 32397, 31338, 33251, 33281, 33284, 33285, 33405, 33377, (01-ಎಸ್.ಟಿ ಮೀಸಲು 33376), (1-ಪ್ರವರ್ಗ 2ಎ-33348), 2) ಕಾಮಗಾರಿ ಅಂದಾಜು ಮೊತ್ತ : ಗರಿಷ್ಠ ರೂ. **196.00 ಲಕ್ಷಗಳು** ಕನಿಷ್ಠ **25.00 ಲಕ್ಷಗಳು** 3) ಗುತ್ತಿಗೆದಾರರ ಅರ್ಹತೆ ವಿವರ : ಈ ಕಾಮಗಾರಿಗೆ ಟೆಂಡರ ಸಲ್ಲಿಸುವವರು, ಲೋಕೋಪಯೋಗಿ ಇಲಾಖೆಯಲ್ಲಿ ನಾಲ್ಕನೆ ದರ್ಜೆ, ಮೂರನೆ ದರ್ಜೆ, ಎರಡನೆ ಹಾಗೂ ಒಂದನೆ ದರ್ಜೆ, ಮೇಲ್ಪಟ್ಟು ಗುತ್ತಿಗೆದಾರರಾಗಿರಬೇಕು, 4) ಇ.ಎಮ್.ಡಿ. ಮೊತ್ತ : **ಗರಿಷ್ಠ ರೂ. 2,48,000.00 ರೂ.ಗಳು ಕನಿಷ್ಠ 42,000.00 ರೂ.ಗಳು.** 5) ಪ್ರೀ ಬಿಡ್ ಮೀಟಿಂಗ್ : 21.02.2026 (11.00 ಗಂಟೆ) 6) ಟೆಂಡರ ಬಗ್ಗೆ ಮಾಹಿತಿ ಹಾಗೂ ಸ್ಪಷ್ಟೀಕರಣ ಕೋರುವ ಕೊನೆಯ ದಿನಾಂಕ : 23.02.2026 (17.30 ಗಂಟೆ) 7) ಟೆಂಡರ ಸಲ್ಲಿಸುವ ಕೊನೆಯ ದಿನಾಂಕ : 24.02.2026 (16.00 ಗಂಟೆ) 9) ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 25.02.2026 (16.30 ಗಂಟೆ) 10) ಆರ್ಥಿಕ ಬಿಡ್ ತೆರೆಯುವ ದಿನಾಂಕ : 26.02.2026 (11.30 ಗಂಟೆ) 11) ಹೆಚ್ಚಿನ ವಿವರಗಳಿಗೆ : ಕಾರ್ಯನಿರ್ವಾಹಕ ಇಂಜೀನಿಯರರು, ಲೋಕೋಪಯೋಗಿ, *ಇಲಾಖೆ, ವಿಭಾಗ ಕಲಬುರಗಿ ಕಚೇರಿ.* 12) **ಸೂಚನೆ : ಜಿ.ಎಸ್.ಟಿ. ಪ್ರತ್ಯೇಕವಾಗಿ ನೀಡಲಾಗುವುದು** 13) ಅಂತರ್ಜಾಲ ತಾಣದ ವಿಳಾಸ : www.kppp.karnataka.gov.in 14) **ಗಮನಿಸಬೇಕಾದ ಅಂಶಗಳು** : ಟಿಪ್ಪಣಿ : 1) ಈ ಕೆಳಗೆ ಸಹಿ ಮಾಡಿರುವವರು ಯಾವೂದೇ ಕಾರಣಗಳನ್ನು ನೀಡದೆ ಟೆಂಡರ್ ಪ್ರಕ್ರಿಯೆಯನ್ನು ಮಂದೂಡುವಿಕೆ/ಸಂಪೂರ್ಣವಾಗಿ ಟೆಂಡರ್ ರದ್ದುಗೊಳಿಸುವ/ ಟೆಂಡರ್ ನಿರಾಕರಿಸುವ ಹಕ್ಕನ್ನು ಹೊಂದಿರುತ್ತಾರೆ. 2) ಇನ್ನು ಮುಂದೆ ಟೆಂಡರ್ ಪ್ರಕ್ರಿಯೆಯಲ್ಲಿ ಯಾವೂದೆ ಬದಲಾವಣೆಗಳು ಇದ್ದಲ್ಲಿ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ. ಬದಲಾಗಿ ವಿದ್ಯುನ್ಮಾನ ಸಂಗ್ರಹಣೆ ವೇದಿಕೆಯಲ್ಲಿ ಮಾತ್ರ ಬದಲಾವಣೆಗಳನ್ನು ಪ್ರಕಟಿಸಲಾಗುವುದು.
ಸಹಿ/- ಕಾರ್ಯನಿರ್ವಾಹಕ ಇಂಜೀನೀಯರರು,
ವಾ.ಸಾ.ಸಂ.ಇ.ಕಲಬುರಗಿ/1080/ದೇಶಪಾಂಡೆ ಪಬ್ಲಿಸಿಟಿ/2025-26 **ಲೋಕೋಪಯೋಗಿ ಇಲಾಖೆ, ವಿಭಾಗ ಕಲಬುರಗಿ**

ನಗರಸಭಾ ಕಾರ್ಯಾಲಯ, ಕಾರವಾರ
E-mail:ka.karwar.cmc@gmail.com | Website: www.karwarcity.mrc.gov.in | Fax: 08382-222170 | Phone: 08382-227900
ನಂ/ನಸಕಾ/ಕಾವಿ/ಟೆಂಡರು-47/2025-26 **ಟೆಂಡರ್ ಪ್ರಕಟಣೆ** ದಿನಾಂಕ: 09.02.2026
ಈ ಮೂಲಕ ಸಾರ್ವಜನಿಕ ಗುತ್ತಿಗೆದಾರರಿಗೆ ತಿಳಿಯಪಡಿಸುವುದೇನೆಂದರೆ ಪಾರದರ್ಶಕ ಕಾಯಿದೆ 1999 ಹಾಗೂ ನಿಯಮಾವಳಿ-2000 ರಂತೆ ಲೋಕೋಪಯೋಗಿ ಇಲಾಖೆ ಹಾಗೂ ಕಾರವಾರ ನಗರಸಭೆಯಲ್